(7)

ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಡಾ॥ ಬಾಬು ಜಗಜೀವನರಾಮ್ ಸಂಶೋಧನಾ ಸಂಸ್ಥೆಗೆ ಅವಶ್ಯಕವಿರುವ ಹುದ್ದೆ ಸೃಜನೆ ಬಗ್ಗೆ.

**ಓದಲಾಗಿದೆ:** 1) 2016-17ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-182

2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಏಕ ಕಡತ ಸಂಖ್ಯೆ: ಸಕನಿ/ಸಿಬ್ಬಂದಿ-3/ಸಿಆರ್-CSW-206/16-17. ದಿನಾಂಕ: 10-08-2017.

<u>ಪ್ರಸ್ತಾವನೆ</u>:-

2016-17ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-182ರಲ್ಲಿ ಬೆಂಗಳೂರು ನಗರದಲ್ಲಿ ಡಾ: ಬಾಬು ಜಗಜೀವನರಾಂ ಸಂಶೋಧನಾ ಸಂಸ್ಥೆಯನ್ನು ಮಾಗಡಿ ರಸ್ತೆಯ ನಿರಾಶ್ರಿತರ ಪರಿಹಾರ ಕೇಂದ್ರದಲ್ಲಿ ಸ್ಥಾಪಿಸಿ ಸಂಶೋಧನೆ ಮತ್ತು ತರಬೇತಿ ಕಾರ್ಯಗಳನ್ನು ನಡೆಸಲಾಗುವುದು ಎಂದು ಘೋಷಿಸಲಾಗಿರುತ್ತದೆ.

2016-17ನೇ ಸಾಲಿನ ಬಜೆಟ್‌ನ ಕಂಡಿಕೆ-182 ರಂತೆ ಬೆಂಗಳೂರು ನಗರದಲ್ಲಿ ಡಾ॥ ಬಾಬು ಜಗಜೀವನರಾಮ್ ಸಂಶೋಧನಾ ಸಂಸ್ಥೆಯನ್ನು ಮಾಗಡಿ ರಸ್ತೆಯ ನಿರಾಶ್ರಿತರ ಪರಿಹಾರ ಕೇಂದ್ರದಲ್ಲಿ ಸ್ಥಾಪಿಸಿ ಸಂಶೋಧನೆ ಮತ್ತು ತರಬೇತಿ ಕಾರ್ಯಕ್ರಮವನ್ನು ನಡೆಸಲಾಗುವುದು ಎಂದು ಘೋಷಿಸಲಾಗಿದೆ. ಅದರಂತೆ, ಸಂಶೋಧನಾ ಕೇಂದ್ರವನ್ನು ಸ್ಥಾಪಿಸಿ ಡಾ॥ ಬಾಬು ಜಗಜೀವನರಾಮ್ ಸಂಶೋಧನಾ ಸಂಸ್ಥೆಯ ಧ್ಯೇಯೋದ್ದೇಶಗಳು, ಶೈಕ್ಷಣಿಕ ಕಾರ್ಯಕ್ರಮಗಳು, ಸಂಸ್ಥೆಯ ಯೋಜನೆಗಳು, ವಿಚಾರ ಸಂಕೀರ್ಣಗಳು, ಕಮ್ಮಟಗಳು, ಸಂಸ್ಥೆಯ ನಿಯತಕಾಲಿಕೆ, ಸಂಸ್ಥೆಯ ಸಾಮಾಜಿಕ ಕಾರ್ಯಕ್ರಮಗಳು, ಚಟುವಟಿಕೆಗಳ ಬಗ್ಗೆ ಪ್ರಸ್ತಾವನೆ ಸಲ್ಲಿಸುತ್ತಾ, ಸಂಸ್ಥೆಗೆ ಅವಶ್ಯಕವಿರುವ ಹುದ್ದೆಗಳನ್ನು ಸೃಜನೆ ಮಾಡಿ ಆದೇಶ ಹೊರಡಿಸಲು ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಏಕ ಕಡತ ಪ್ರಸ್ತಾವನೆಯಲ್ಲಿ ಕೋರಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಡಾ॥ ಬಾಬು ಜಗಜೀವನರಾಮ್ ಸಂಶೋಧನಾ ಸಂಸ್ಥೆಗೆ ಅವಶ್ಯಕವಿರುವ ಹುದ್ದೆಗಳನ್ನು ಸೃಜನೆ ಮಾಡಲು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರಿ ಆದೇಶ ಸಂಖ್ಯೆ: ಸಕಇ 392 ಪಕಸೇ 2016, ಬೆಂಗಳೂರು, ದಿನಾಂಕ: 27-08-2018</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಡಾ॥ ಬಾಬು ಜಗಜೀವನರಾಮ್ ಸಂಶೋಧನಾ ಸಂಸ್ಥೆಯ ಧ್ಯೇಯೋದ್ದೇಶಗಳು, ಶೈಕ್ಷಣಿಕ ಕಾರ್ಯಕ್ರಮಗಳು, ಸಂಸ್ಥೆಯ ಯೋಜನೆಗಳು, ವಿಚಾರ ಸಂಕೀರ್ಣಗಳು, ಕಮ್ಮಟಗಳು, ಸಂಸ್ಥೆಯ ನಿಯತಕಾಲಿಕೆ, ಸಂಸ್ಥೆಯ ಸಾಮಾಜಿಕ ಕಾರ್ಯಕ್ರಮಗಳು, ಚಟುವಟಿಕೆಗಳನ್ನು ಸುಗಮವಾಗಿ ನಡೆಸಲು ಡಾ॥ ಬಾಬು ಜಗಜೀವನರಾಮ್ ಸಂಶೋಧನಾ ಸಂಸ್ಥೆಗೆ 11 ಹುದ್ದೆಗಳನ್ನು ಈ ಕೆಳಕಂಡಂತೆ ಮಂಜೂರು ಮಾಡಿ ಆದೇಶಿಸಿದೆ.

------2

Scanned by CamScanner
Scanned by CamScanner

| ಕ್ರ. ಸಂ. | ಪದನಾಮ | ವೇತನ ಶ್ರೇಣಿ | ಸೃಜಿಸಿದ ಹುದ್ದೆಗಳ ಸಂಖ್ಯೆ | ನೇಮಕಾತಿ ವಿಧಾನ |
|---|---|---|---|---|
| 1 | ನಿರ್ದೇಶಕರು | (48900-63600) 90500-123300 | 01 | ಸಮಾಜ ಕಲ್ಯಾಣ ಇಲಾಖೆಯ ಅಪರ ನಿರ್ದೇಶಕರ ವೃಂದದ ಅಧಿಕಾರಿಗಳಿಂದ ನಿಯೋಜನೆ ಮೂಲಕ ಭರ್ತಿ ಮಾಡುವುದು. |
| 2 | ಆಡಳಿತಾಧಿಕಾರಿ | (28100-50100) 52650-97100 | 01 | ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಗ್ರೇಡ್-1 ವೃಂದದ ಅಧಿಕಾರಿಗಳಿಂದ ನಿಯೋಜನೆ ಮೂಲಕ ಭರ್ತಿ ಮಾಡುವುದು. |
| 3 | ಸಹಾಯಕ ಪ್ರಾಧ್ಯಾಪಕರು | (22800-43200) 43100-83900 | 01 | ಪದವಿ ಪೂರ್ವ ಶಿಕ್ಷಣ ಇಲಾಖೆಯಿಂದ ನಿಯೋಜನೆ ಮೇಲೆ ಭರ್ತಿ ಮಾಡುವುದು. |
| 4 | ಲೈಬ್ರರಿಯನ್ | (20000-36300) 37900-70850 | 01 | ನಿಯೋಜನೆ |
| 5 | ಶೀಘ್ರಲಿಪಿಗಾರರು | -- | 01 | ಹೊರಗುತ್ತಿಗೆ |
| 6 | ಪ್ರಥಮ ದರ್ಜೆ ಸಹಾಯಕ | (14550-26700) 27650-52650 | 01 | ಸಮಾಜ ಕಲ್ಯಾಣ ಇಲಾಖೆಯಿಂದ ನಿಯೋಜನೆ ಮೇಲೆ ಭರ್ತಿ ಮಾಡುವುದು. |
| 7 | ಸಂಬಾರಿ ಸಂಶೋಧಕರು | (14550-26700) 27650-52650 | 01 | |
| 8 | ದ್ವಿತೀಯ ದರ್ಜೆ ಸಹಾಯಕ | (11600-21000) 21400-42000 | 01 | |
| 9 | ಬೆರಳಚ್ಚುಗಾರರು | -- | 01 | ಹೊರಗುತ್ತಿಗೆ |
| 10 | ವಾಹನ ಚಾಲಕರು | -- | 01 | |
| 11 | ಜವಾನರು | -- | 01 | |
| | ಒಟ್ಟು | | 11 | |

ಸಂಸ್ಥೆಯ ನಿರ್ದೇಶಕರು, ಆಡಳಿತಾಧಿಕಾರಿ ಮತ್ತು ಪ್ರಾಧ್ಯಾಪಕರುಗಳು ಅನುಬಂಧದಲ್ಲಿ ನೀಡಿರುವಂತೆ ಕರ್ತವ್ಯ ಮತ್ತು ಜವಾಬ್ದಾರಿಗಳನ್ನು ನಿರ್ವಹಿಸತಕ್ಕದ್ದು.

ಇದನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 365 ವೆಚ್ಚ-3/2018, ದಿನಾಂಕ: 09-08-2018ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಶೋಭಾ ತಿಂ...)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ.

<u>ಇವರಿಗೆ:-</u>

1) ಮಹಾಲೇಖಪಾಲರು, (ಎ ಮತ್ತು ಇ. ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು

--------3

Scanned by CamScanner

Scanned by CamScanner

(5)

2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
3) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3&9), ಬೆಂಗಳೂರು
4) ಕಾರ್ಯದರ್ಶಿ, ನಿರಾಶ್ರಿತರ ಪರಿಹಾರ ಕೇಂದ್ರ, ಮಾಗಡಿ ರಸ್ತೆ, ಬೆಂಗಳೂರು.
5) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು

ಪ್ರತಿ ಮಾಹಿತಿಗಾಗಿ:

1) ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
3) ಸರ್ಕಾರದ ಜಂಟಿ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು.

* * * * *

Scanned by CamScanner

Scanned by CamScanner